ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

31

ಶಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 23/3/21

# ಶೇ 50ರ ಮಿತಿ ಹೆಚ್ಚಾಗಲಿ

## ಮೀಸಲಾತಿ: ಮರುಪರಿಶೀಲನೆಗೆ 'ಸುಪ್ರೀಂ'ಗೆ ಅರ್ಜಿ

ಪ್ರಜಾವಾಣಿ ವಾರ್ತೆ 23-3-

### ರಾಜ್ಯಗಳಿಗೆ ಅಧಿಕಾರ ಕೊಡಿ'

'ಹಿಂದುಳಿದ ವರ್ಗಗಳಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಶೇ 50ರ ಮಿತಿಯನ್ನು ಮೀರಿ ಮೀಸಲಾತಿ ಅಗತ್ಯ ಒಂದು ವೇಳೆ ತೀರ್ಪಿನ ಮರುಪರಿಶೀಲನೆಯನ್ನು ಉನ್ನತ ಪೀಠಕ್ಕೆ ವಹಿಸಲಾಗದು ಎಂಬ ತೀರ್ಮಾನಕ್ಕೆ ಕೋರ್ಟ್ ಬರುವು ದಾದರೆ, ಅಗತ್ಯತೆ ಮತ್ತು ಪ್ರಮಾಣೀಕೃತ ಅಂಕಿಅಂಶಗಳನ್ನು ಆಧರಿಸಿ ರಾಜ್ಯ ಸರ್ಕಾರಗಳೇ ತೀರ್ಮಾನವನ್ನು ತೆಗೆದುಕೊಳ್ಳಬಹುದು ಎಂದು ಘೋಷಿಸಬೇಕು' ಎಂದೂ ಸರ್ಕಾರ ಮನವಿ ಮಾಡಿದೆ.

ನವದೆಹಲಿ: 'ಮೀಸಲಾತಿ ಪ್ರಮಾಣವು ಶೇ 50 ಮೀರಬಾರದು ಎಂದು ಒಂಬತ್ತು ಸದಸ್ಯರ ಪೀಠ 1992ರಲ್ಲಿ ನೀಡಿದ್ದ ತೀರ್ಪಿನ ಮರುಪರಿಶೀಲನೆ ಅಗತ್ಯವಿದೆ' ಎಂದು ಕರ್ನಾಟಕ ಸರ್ಕಾರ ಸೋಮವಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ. ಇಂದಿರಾ ಸಹಾನಿ ಪ್ರಕರಣ ದಲ್ಲಿ ಪೀಠ ಈ ತೀರ್ಪು ನೀಡಿತ್ತು.

ಸೋಮವಾರ ಬೆಂಗಳೂರಿನಲ್ಲಿ ನಡೆದ ರಾಜ್ಯ (ಕರ್ನಾಟಕ) ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗಿದೆ.

ಸಾಮಾಜಿಕ ಸ್ತರಗಳಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಸುಪ್ರೀಂ ಕೋರ್ಟ್ ನಿಗದಿಪಡಿಸಿದ ಮಿತಿಯಲ್ಲಿ, ವಸ್ತುಸ್ಥಿತಿಯನ್ನು ಪರಿಗಣಿಸಿ, ನ್ಯಾಯ ಒದಗಿಸುವ ಗುರಿ ಸಾಧಿಸಲಾಗದು ಎಂದು ಕರ್ನಾಟಕ ಸರ್ಕಾರ ಈ ಸಂಬಂಧ ಸಲ್ಲಿಸಿದ ಅರ್ಜಿಯಲ್ಲಿ ಪ್ರತಿಪಾದಿಸಿದೆ.

ಹಿಂದುಳಿದ ವರ್ಗಗಳ ಜನರಿಗೆ ಮೀಸಲಾತಿ ಕಲ್ಪಿಸುವಲ್ಲಿ ರಾಜ್ಯ ಸರ್ಕಾರದ ಅನುಭವದ ಪ್ರಕಾರ, ಮೀಸಲಾತಿ ಮಿತಿ ಶೇ 50ರಷ್ಟು ಮೀರು ವುದು ಅಗತ್ಯ ಎಂದೂ ಪ್ರತಿಪಾದಿಸಿದೆ. ಈ ಸಂಬಂಧ ಲಿಖಿತ ಹೇಳಿಕೆಯನ್ನು ಸರ್ಕಾರದ ಪರವಾಗಿ ವಕೀಲ ಶುಭ್ರಾಂಶು ಪಧಿ ಅವರು ಕೋರ್ಟ್‌ಗೆ ಸಲ್ಲಿಸಿದರು.

ಮರಾಠಾ ಸಮುದಾಯಕ್ಕೆ ಮೀಸಲಾತಿ ಒದಗಿಸಲು ಮಹಾರಾಷ್ಟ್ರ ಸರ್ಕಾರ ರಚಿಸಿರುವ ಕಾಯ್ದೆಯ ಪರಿಶೀಲನೆ ವೇಳೆ ನ್ಯಾಯಮೂರ್ತಿ ಅಶೋಕ್ ಭೂಷಣ್ ನೇತೃತ್ವದ ಪಂಚಸದಸ್ಯರ ಪೀಠವು ರೂಪಿಸಿದ ಪ್ರಶ್ನಾವಳಿಗೆ ಪ್ರತಿಕ್ರಿಯೆಯಾಗಿ ಸರ್ಕಾರ ಈ ಪ್ರತಿಕ್ರಿಯೆಯನ್ನು ದಾಖಲಿಸಿದೆ.

ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ (ಇಡಬ್ಲ್ಯುಎಸ್) ಶೇ 10ರಷ್ಟು ಮೀಸಲಾತಿ ಕಲ್ಪಿಸುವ ಸಂವಿಧಾನದ 103ನೇ ತಿದ್ದುಪಡಿಯ- ನ್ನು ರಾಜ್ಯ ಸರ್ಕಾರ ಉಲ್ಲೇಖಿಸಿದ್ದು, ಸಂವಿಧಾನದಲ್ಲಿಯೇ ಮೀಸಲಾತಿ ಮಿತಿಯು ಶೇ 50ರಷ್ಟು ಮೀರಲು ಅವಕಾಶ ಕಲ್ಪಿಸಲಾಗಿದೆ ಎಂದಿದೆ. ಮಿತಿ ಶೇ 50 ಮೀರಬಹುದು ಎಂದು ಸುಪ್ರೀಂ ಕೋರ್ಟ್ ಕೂಡಾ ಸ್ಪಷ್ಟ ಪಡಿಸಿದೆ ಎಂದಿರುವ ಸರ್ಕಾರ, ಸಮರ್ಥನೆಯಾಗಿ ಎಸ್.ವಿ.ಜೋಷಿ ಪ್ರಕರಣವನ್ನು (2012) ಉಲ್ಲೇಖಿಸಿತು.

ಕಳೆದ ಹಲವು ದಶಕಗಳಲ್ಲಿ ಸಾಮಾಜಿಕ ಸ್ತರ, ವಸ್ತು ಸ್ಥಿತಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಈ ಅಂಶದ ಆಧಾರದಲ್ಲಿಯೇ ಇಂದಿರಾ ಸಹಾನಿ ಪ್ರಕರಣದ ತೀರ್ಪನ್ನು ಮರುಪ- ರಿಶೀಲಿಸಬೇಕು. ಹಿಂದುಳಿದ ವರ್ಗಗಳಿಗೆ ಶೇ 52ರವರೆಗೆ ಮೀಸಲಾತಿಗೆ ಅವಕಾಶ ಕಲ್ಪಿಸಿದ ಮಂಡಲ ಆಯೋಗವು, ಇದಕ್ಕೆ1931ರಲ್ಲಿ ಇದ್ದ ಜಾತಿವಾರು ಜನಸಂಖ್ಯೆಯನ್ನು ಆಧರಿಸಿತ್ತು. ಕಳೆದ 40 ವರ್ಷಗಳಲ್ಲಿ ಈ ವರ್ಗಗಳ ಜನ ಸಂಖ್ಯೆಯಲ್ಲಿಯೂ ಸಾಕಷ್ಟು ಬದಲಾಗಿದೆ ಎಂದಿದೆ.

ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಶಾಸನಬದ್ಧ ಅಧಿಕಾರವನ್ನು ನೀಡುವ ಸಂವಿಧಾನದ 102ನೇ ತಿದ್ದುಪಡಿಯು, ಸಾಮಾಜಿಕ ಮತ್ತು ಆರ್ಥಿಕವಾಗಿ ಹಿಂದು ಳಿದ ವರ್ಗಳಿಗೆ ಮೀಸಲಾತಿ ಒದಗಿ ಸುವ ಉದ್ದೇಶದಿಂದ ಕಾಯ್ದೆ ರೂಪಿ ಸುವ ರಾಜ್ಯಗಳ ಅಧಿಕಾರಕ್ಕೆ ಧಕ್ಕೆ ಉಂಟು ಮಾಡುವುದಿಲ್ಲ ಎಂದೂ ಸರ್ಕಾರ ತನ್ನ ಅರ್ಜಿಯಲ್ಲಿ ಉಲ್ಲೇಖಿಸಿದೆ.